ದಿನಾಂಕ : DATE : 7/4/21
ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ
89

ಯುವತಿಗೆ 3 ದಿನ ವಿಶ್ರಾಂತಿ ಕೊಟ್ಟಿರುವ ತನಿಖಾಧಿಕಾರಿಗಳು

ತೀರ್ಪುಗೆ ಸಿದ್ಧವಾಗಲಿದೆ ಸಿಡಿ ಪ್ರಕರಣದ ತನಿಖಾ ವರದಿ

ವಿಜಯವಾಣಿ ಸುದ್ದಿಜಾಲ ಬೆಂಗಳೂರು 7-4-21

ಅಶ್ಲೀಲ ಸಿಡಿ ಪ್ರಕರಣದ ತನಿಖಾ ವರದಿ ಸಲ್ಲಿಸುವಂತೆ ಹೈಕೋರ್ಟ್ ಸೂಚಿಸಿರುವ ಹಿನ್ನೆಲೆಯಲ್ಲಿ ವರದಿ ಸಿದ್ಧಪಡಿಸುವ ಕೆಲಸ ಆರಂಭವಾಗಿದ್ದು, ತೀಪ್ರುದಲ್ಲೇ ಅಧಿಕಾರಿಗಳು ಕೋರ್ಟ್‌ಗೆ ವರದಿ ಸಲ್ಲಿಸಲಿದ್ದಾರೆ. ಇನ್ನೊಂದೆಡೆ ಯುವತಿಗೆ 3 ದಿನ ವಿಶ್ರಾಂತಿ ಕೊಟ್ಟಿರುವ ತನಿಖಾಧಿಕಾರಿಗಳು, ನಂತರ ಮಾಜಿ ಸಚಿವ ರಮೇಶ್ ಜಾರಕಿಹೊಳಿ ಸದಾಶಿವನಗರ ಠಾಣೆ ಹೊಟ್ಟಿರುವ ಷಡ್ಯಂತ್ರ ದೂರಿನ ಸಂಬಂಧ ವಿಚಾರಣೆ ಮುಂದುರಿಸಲಿದ್ದಾರೆ.

ಮಂಗಳವಾರ ನಗರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಪೊಲೀಸ್ ಆಯುಕ್ತ ಕಮಲ್ ಪಂತ್, ಹಿರಿಯ ಐಪಿಎಸ್ ಅಧಿಕಾರಿ ಸೌಮೇಂದು ಮುಖರ್ಜಿ ನೇತೃತ್ವದಲ್ಲಿ ಎಸ್‌ಐಟಿ ಅಧಿಕಾರಿಗಳು ಸಭೆ ನಡೆಸಿದ್ದಾರೆ. ಯುವತಿ ಹಾಗೂ ರಮೇಶ್ ಜಾರಕಿಹೊಳಿ ನೀಡಿರುವ ಹೇಳಿಕೆ, ಡಿಜಿಟಲ್ ಸಾಕ್ಷ್ಯ, ವೈದ್ಯಕೀಯ ಪರೀಕ್ಷಾ ವರದಿ, ನಾಪತ್ತೆಯಾದ ಇಬ್ಬರು ಶಂಕಿತರ ಪತ್ತೆ ಕಾರ್ಯದ ಬೆಳವಣಿಗೆ ಸೇರಿ ಇನ್ನಿತರ ಮಾಹಿತಿಯನ್ನು ಎಸ್‌ಐಟಿ ವರದಿಯಲ್ಲಿ ಉಲ್ಲೇಖಿಸುವ ಸಾಧ್ಯತೆಗಳಿವೆ. ಸಿಡಿ ಕೇಸ್‌ನಲ್ಲಿ ದಾಖಲಾದ 3 ಎಫ್‌ಐಆರ್‌ಗಳ ತನಿಖೆಗೆ ಸಂಬಂಧಿಸಿದ ವರದಿ ನೀಡುವ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ.

ಸಿಡಿ ಪ್ರಕರಣದಲ್ಲಿ ಎಸ್‌ಐಟಿ ಸ್ವತಂತ್ರವಾಗಿ ತನಿಖೆ ನಡೆಸುತ್ತಿದ್ದು, ಕಾನೂನು ಚೌಕಟ್ಟಿನಲ್ಲಿ ಕೆಲಸ ನಿರ್ವಹಿಸುತ್ತಿದೆ. ಎಸ್‌ಐಟಿ ತನಿಖೆ ಬಗ್ಗೆ ನ್ಯಾಯಾಲಯ ಮಾಹಿತಿ ಕೇಳಿದೆ. ಮುಚ್ಚಿದ ಲಕೋಟೆಯಲ್ಲಿ ನ್ಯಾಯಾಲಯಕ್ಕೆ ವರದಿ ಸಲ್ಲಿಸಲಾಗುತ್ತದೆ.

ಪ್ರವೀಣ್ ಸೂದ್ ರಾಜ್ಯ ಪೊಲೀಸ್ ಮಹಾನಿರ್ದೇಶಕ

ಈ ನಡುವೆ ಸಿಡಿಯಲ್ಲಿರುವ ಯುವತಿ ಕೆಲ ವ್ಯಕ್ತಿಗಳೊಂದಿಗೆ ಲಕ್ಷಾಂತರ ರೂ. ಹಣಕಾಸು ವಹಿವಾಟು ನಡೆಸಿರುವುದಕ್ಕೆ ಸಂಬಂಧಿಸಿದ ಡಿಜಿಟಲ್ ಸಾಕ್ಷ್ಯ ಎಸ್‌ಐಟಿ ಕೈ ಸೇರಿದೆ ಎಂದು ಗೊತ್ತಾಗಿದೆ.

ವಿಶ್ರಾಂತಿ ಬಳಿಕ ಮತ್ತೆ ವಿಚಾರಣೆ: 3 ದಿನಗಳ ಬಳಿಕ ಸದಾಶಿವನಗರ ಠಾಣೆಯಲ್ಲಿ ರಮೇಶ್ ಜಾರಕಿಹೊಳಿ ಕೊಟ್ಟಿರುವ ದೂರಿಗೆ ಸಂಬಂಧಿಸಿದಂತೆ ಯುವತಿಯನ್ನು ವಿಚಾರಣೆ ನಡೆಸಲು ಎಸ್‌ಐಟಿ ನಿರ್ಧರಿಸಿದೆ. ಹೀಗಾಗಿ ಯುವತಿಗೆ ಸದ್ಯ ವಿಶ್ರಾಂತಿ ಸಿಗಲಿದೆ. ಇತ್ತ ರಮೇಶ್ ಜಾರಕಿಹೊಳಿ ಹೇಳಿಕೆ ದಾಖಲಿಸಿಕೊಳ್ಳದೇ ಪ್ರಕರಣದ ತನಿಖೆ ಮುಂದೆ ಸಾಗುತ್ತಿಲ್ಲ ಎನ್ನಲಾಗಿದೆ. ಕಬ್ಬನ್‌ಪಾರ್ಕ್ ಪೊಲೀಸ್ ಠಾಣೆಯಲ್ಲಿ ಯುವತಿ ರಮೇಶ್ ಜಾರಕಿಹೊಳಿ ವಿರುದ್ಧ ನೀಡಿರುವ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಪೇಪರ್ ಕೆಲಸ ಮುಗಿದ ಬಳಿಕ ಮುಂದಿನ ತನಿಖೆ ನಡೆಸಲು ಎಸ್‌ಐಟಿ ನಿರ್ಧರಿಸಿದೆ. ಎಸ್‌ಐಟಿ ಕೇಳಿದ ಬಹುತೇಕ ಪ್ರಶ್ನೆಗಳಿಗೆ ಯುವತಿ ಗೊಂದಲದ ಹೇಳಿಕೆ ನೀಡಿದ್ದಾಳೆ ಎನ್ನಲಾಗಿದೆ.

ಜಾರಕಿಹೊಳಿ ವಿರುದ್ಧ ಕಮಿಷನರ್‌ಗೆ ದೂರು

ಆರೋಪಿ ರಮೇಶ್ ಜಾರಕಿಹೊಳಿ ಎಸ್‌ಐಟಿ ವಿಚಾರಣೆಗೆ ಹಾಜರಾಗದೆ ಆನಾರೋಗ್ಯದ ನೆಪವೊಡ್ಡಿ ತನಿಖೆಗೆ ಸಹಕರಿಸುತ್ತಿಲ್ಲ ಎಂದು ಆರೋಪಿಸಿ ಸಿಡಿಯಲ್ಲಿರುವ ಯುವತಿ ಪರ ವಕೀಲ ಸೂರ್ಯ ಮುಕುಂದ್‌ರಾಜ್ ಹಾಗೂ ಕೆ.ಎನ್.ಜಗದೀಶ್, ನಗರ ಪೊಲೀಸ್ ಆಯುಕ್ತ ಕಮಲ್ ಪಂತ್ ಅವರಿಗೆ ಮಂಗಳವಾರ ದೂರು ನೀಡಿದ್ದಾರೆ. ಸರ್ಕಾರಿ ಆಸ್ಪತ್ರೆ ಸಿಬ್ಬಂದಿ ಮೇಲೆ ಒತ್ತಡ ಹೇರಿ ನಕಲಿ ಕರೊನಾ ಪಾಸಿಟಿವ್ ವರದಿ ಮತ್ತು ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿರುವ ನಾಟಕ ಮಾಡುತ್ತಿದ್ದಾರೆ. ಇಲ್ಲಿವರೆಗೂ ತನಿಖಾಧಿಕಾರಿಗಳಿಗೆ ಸಹಕಾರ ನೀಡದೆ ವಿಚಾರಣೆಗೆ ಗೈರಾಗುತ್ತಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಆರೋಪದ ಪರಿಶೀಲನೆ: ಎಸ್‌ಐಟಿ ವಿರುದ್ಧ ಆರೋಪ ಮಾಡಿ ಯುವತಿ ಪತ್ರ ಬರೆದಿರುವ ಕುರಿತು ಮಾತನಾಡಿದ ನಗರ ಪೊಲೀಸ್ ಆಯುಕ್ತ ಕಮಲ್ ಪಂತ್, ಯುವತಿಯ ಪತ್ರ ನೋಮವಾರ ನಮ್ಮ ಕಚೇರಿಗೆ ಕೊಟ್ಟು ಹೋಗಿದ್ದಾರೆ. ಆ ಪತ್ರವನ್ನು ಕೂಲಂಕಷವಾಗಿ ಪರಿಶೀಲನೆ ಮಾಡುತ್ತಿದ್ದೇವೆ. ಅಧಿಕಾರಿಗಳಿಂದಲೂ ವರದಿ ತೆಗೆದುಕೊಳ್ಳುತ್ತೇವೆ. ಎಸ್‌ಐಟಿ ಉತ್ತಮವಾಗಿ ಕೆಲಸ ಮಾಡುತ್ತಿದೆ. ಸೌಮೇಂದು ಮುಖರ್ಜಿ ಉತ್ತಮ ಹಾಗೂ ದಕ್ಷ ಅಧಿಕಾರಿ ಇದ್ದಾರೆ. ಅವರ ಬಗ್ಗೆ ಆರೋಪ ಮಾಡುವುದು ಸರಿ ಅಲ್ಲ ಎಂದಿದ್ದಾರೆ.

ಕಮಿಷನರ್ ವಿರುದ್ಧ ಖಾಸಗಿ ದೂರು: ಸಿಡಿ ಪ್ರಕರಣಕ್ಕೆ ಸಂಬಂಧಿಸಿದಂತೆ ನಗರ ಪೊಲೀಸ್ ಆಯುಕ್ತ ಕಮಲ್ ಪಂತ್, ಕೇಂದ್ರ ವಿಭಾಗದ ಡಿಸಿಪಿ ಆನುಚೇತ್ ಹಾಗೂ ಕಬ್ಬನ್‌ಪಾರ್ಕ್ ಇನ್‌ಸ್ಪೆಕ್ಟರ್ ಮಾರುತಿ ವಿರುದ್ಧ ಆದರ್ಶ ಆರ್. ಅಯ್ಯರ್ ಎಂಬುವರು ಖಾಸಗಿ ದೂರು ದಾಖಲಿಸಿದ್ದಾರೆ. ಸಿಡಿ ಪ್ರಕರಣದಲ್ಲಿ ನಿರ್ಭಯ ಕಾಯ್ದೆಯಡಿ ಕಾನೂನು ಉಲ್ಲಂಘನೆಯಾಗಿದೆ ಎಂದು ದೂರು ನೀಡಿದ್ದಾರೆ. ಸಾಮಾಜಿಕ ಕಾರ್ಯಕರ್ತ ದಿನೇಶ್ ಕಲ್ಲಹಳ್ಳಿ ಕೊಟ್ಟ ದೂರು ಆಧರಿಸಿ ಎಫ್‌ಐಆರ್ ದಾಖಲಿಸದ ಹಿನ್ನೆಲೆಯಲ್ಲಿ ಈ ಖಾಸಗಿ ದೂರನ್ನು 8ನೇ ಎಸಿಎಂಎಂ ನ್ಯಾಯಾಲಯದಲ್ಲಿ ದಾಖಲಿಸಿದ್ದಾರೆ ಎಂದು ತಿಳಿದು ಬಂದಿದೆ.